ಆತ. ತನಗೆ ಅಯಾಚಿತವಾಗಿ ದೊರಕಿದ ಆಹಾರದ ಗಿರಾಕಿಗಳನ್ನು ಹಲವಾರು ವ್ಯಾಪಾರಗಳಿಗೆ ಆತ ಬಳಸಿಕೊಂಡ. ಅಂದರೆ ಅವನ ಮನೆಯಲ್ಲಿ ಮಾಡಿದ ದೋಸೆ, ರೊಟ್ಟಿ, ಕಡುಬು, ಪಲ್ಯಗಳೇನಾದರೂ ಆತನಿಗೆ ಇಷ್ಟವಾಗದಿದ್ದರೆ ಬೇರೆ ಹುಡುಗರಂತೆ ಆತ ರಗಳೆ ಮಾಡುತ್ತಿರಲಿಲ್ಲ. ಸುಮ್ಮನೆ ಒಂದು ಕವರಿನಲ್ಲಿ ಹಾಕಿಕೊಂಡು ಪಾಟಿಚೀಲದಲ್ಲಿರಿಸಿಕೊಂಡು ಶಾಲೆಗೆ ಬಂದು ಮಾರಿ ಬಿಡುತ್ತಿದ್ದ. ಕೆಲವು ಸಲ ತನ್ನ ಪಾಲಿನ ತಿಂಡಿಗಳು ಸಾಲದೆಂದು ಅನ್ನಿಸಿದಾಗ ಅಂದರೆ ಮಾರುಕಟ್ಟೆಯ ಬೇಡಿಕೆ ಹೆಚ್ಚಿದ್ದಾಗ ಅಡುಗೆ ಮನೆಯಲ್ಲಿ ಹರಿದ ದೋಸೆ, ಉಳಿದ ರೊಟ್ಟಿ ಇತ್ಯಾದಿಗಳನ್ನು ಎಮ್ಮೆಗೆ ಹಾಕುವುದಕ್ಕಾಗಿ ತೆಗೆದಿರಿಸುವ ಅಕ್ಕಚ್ಚು ಪಾತ್ರೆಯಿಂದ ಎಗರಿಸಿಕೊಂಡು ತನ್ನ ಸ್ಟಾಕ್ ಶಾರ್ಟೇಜು ಸರಿಪಡಿಸಿಕೊಳ್ಳುತ್ತಿದ್ದ. ಇಂತಹ ಮಾರಾಟದಿಂದ ಗಳಿಸಿದ ಹಣವನ್ನು ಅವನೆಂದೂ ಪೋಲು ಮಾಡುತ್ತಿರಲಿಲ್ಲ. ಮನೆಯ ಪುರುಷ ಸದಸ್ಯರಿಗೆ ತಿಳಿಯದಂತೆ ಮಹಿಳೆಯರು ಕೈಗೊಳ್ಳುವ ಸಾಹಸಗಳಿಗೆ ಬಂಡವಾಳದಂತೆ ಕೈಗಡ ಕೊಡುತ್ತಿದ್ದ. ಅದಕ್ಕೆ ಬದಲಾಗಿ ಆ ಹೆಂಗಸರು ತಮಗೆ ಅನುಕೂಲವಾದಾಗ ಹೆಚ್ಚಿನ ಹಣವನ್ನು ಕೊಡುವುದಲ್ಲದೇ ಹಲವು ಬಗೆಯ ತಿಂಡಿ-ತೀರ್ಥಗಳನ್ನು ಬಡ್ಡಿಯಂತೆ ಕೊಡುತ್ತಿದ್ದರು. ಹೀಗೆ ಪದುಮಣ್ಣನ ವ್ಯಾಪಾರ-ವಹಿವಾಟುಗಳು ಬಾಲ್ಯದಲ್ಲೇ ಸಾಕಷ್ಟು ದೊಡ್ಡ ಪ್ರಮಾಣದಲ್ಲಿ ನಡೆಯುತ್ತಿದ್ದವು. ವಿಷಯ ಇಷ್ಟೇ ಆಗಿದ್ದರೆ ಪದುಮಣ್ಣನ ಬಗ್ಗೆ ಬರೆಯಬೇಕಾಗಿರಲಿಲ್ಲ. ಅವನು ತನ್ನ ಮಾರಾಟಪ್ರತಿಭೆಯನ್ನು ಮುಂದುರಿಸಿಕೊಂಡು ಅಪ್ರತಿಮ ವ್ಯವಹಾರಸ್ಥನಾಗಿ ಟಾಟಾ, ಅಂಬಾನಿಗಳಿಗೇ ಸೆಡ್ಡು ಹೊಡೆದು ಪದ್ಮವಿಭೂಷಣ ಇತ್ಯಾದಿ ಪಡೆದುಕೊಂಡು ಸುಖವಾಗಿ ಇರಬಹುದಿತ್ತು. ಆದರೆ, ಪ್ರಾಥಮಿಕಶಾಲೆ ಬಿಟ್ಟು ಹೈಸ್ಕೂಲಿಗೆ ಬರುವಷ್ಟರಲ್ಲಿ ಪದುಮಣ್ಣ ದುಡಿಮೆಯ ದಾರಿಯನ್ನೇ ಬದಲಾಯಿಸಿಕೊಂಡಿದ್ದ. ಸರಕಿನಿಂದ ಸೇವಾಕ್ಷೇತ್ರಕ್ಕೆ ಶಿಫ್ಟ್ ಆಗಿದ್ದ. ಅಂದರೆ ಗೂಡ್ಸ್ ಟು ಸರ್ವಿಸ್ ಸೆಕ್ಟರ್.

ಪದುಮಣ್ಣನಿಂದ ಹಣಕಾಸಿನ ನೆರವು ತೆಗೆದುಕೊಳ್ಳುತ್ತಿದ್ದ ಹೆಂಗಸರು ಅವನನ್ನು ತಮ್ಮ ಒಳಗುಟ್ಟಿನ ಸಂಗತಿಗಳಿಗೆ ಆಪ್ತ ಸಲಹೆಗಾರನನ್ನಾಗಿ ಬಳಸಿಕೊಳ್ಳುತ್ತಿದ್ದರು. ಗಂಡಸರ ಗಮನಕ್ಕೆ ಬರದಂತೆ ಗುಟ್ಟಾಗಿ ಶೇಖರಿಸಿಕೊಂಡ ಗೋಡಂಬಿ, ದಾಲ್ಚಿನ್ನಿ, ಮುರುಗಲ ತುಪ್ಪ, ಆರಾರೋಟು, ಅರಿಶಿಣ ಪುಡಿ ಇತ್ಯಾದಿಗಳಿಗೆ ಸೂಕ್ತ ಗಿರಾಕಿಯ ಹೆಸರು ಸೂಚಿಸುವುದು, ಹೆಂಗಸರು ಮದುವೆಯಂತಹ ಕಾರ್ಯಗಳಿಗೆ ಹೋಗುವಾಗ ಎರವಲು ಚಿನ್ನ ಧರಿಸುವ ಆಸೆಪಟ್ಟರೆ ಯಾವ ಆಭರಣ ಯಾರ ಬಳಿಯಿದೆಯೆಂಬ ಮಾಹಿತಿ ನೀಡುವುದು, ಅವರ ಗುಪ್ತಧನಕ್ಕೆ ನಂಬಿಗಸ್ತ ಗಿರಾಕಿ ಹುಡುಕುವುದು ಹೀಗೆ ತನ್ನ ಹಳ್ಳಿಯ ಮಹಿಳಾ ಆರ್ಥಿಕತೆಯ ಕ್ಷೇತ್ರಕ್ಕೆ ಪದುಮಣ್ಣನದು ದೊಡ್ಡ ಕೊಡುಗೆಯಿದೆ. ಆದರೆ ಅವನ ಅಮೂಲ್ಯ ಸೇವೆಯ ಮಹತ್ವ ಅರ್ಥವಾಗದ ಅವನ ಶಿಕ್ಷಕರು ಅವನನ್ನು ಅಡ್ಡಕಸುಬಿಯೆಂದು ಅಪಮಾನಿಸಿ ಶಿಕ್ಷೆ ನೀಡುತ್ತಿದ್ದರು.

ಕಾಲೇಜು ಮೆಟ್ಟಿಲು ಹತ್ತುವಷ್ಟರಲ್ಲಿ ಪದುಮಣ್ಣನ ಕಾರ್ಯಕ್ಷೇತ್ರ ಮತ್ತಷ್ಟು ವಿಸ್ತಾರಗೊಂಡಿತು. ಇನ್ನೂ ಮೊಬೈಲುಗಳು ಬಂದಿರದ ಆ ಕಾಲದಲ್ಲಿ ಮಲೆನಾಡಿನ ಕೊಂಪೆಗಳಿಂದ ಸುತ್ತುವರೆದ ಪಟ್ಟಣದಲ್ಲಿ ವಾಸಿಸುತ್ತಿದ್ದ ಆತ ಯಾವುದೇ ವ್ಯಕ್ತಿಯ ಯಾವುದೇ ರೀತಿಯ ಕೆಲಸಕ್ಕೆ ಒದಗಬಲ್ಲ ಸರ್ವೀಸ್ ಪ್ರೊವೈಡರ್ ಆಗಿದ್ದ. ತಾನು ಕಾಲೇಜಿಗೆ ಹೋಗುವ ದಾರಿಯಲ್ಲಿಯೇ ಕರೆಂಟು ಬಿಲ್ಲು ಕಟ್ಟುವುದು, ಔಷಧಿ ಗುಳಿಗೆ ತರುವುದು, ಬ್ಯಾಂಕಿನಿಂದ ದುಡ್ಡು ತಂದು ಕೊಡುವುದು, ಯಾರಿಗಾದರೂ ಮನಿಯಾರ್ಡರು ಮಾಡುವುದು, ದಿನಸಿ ಸಾಮಾನು ತಂದು ಕೊಡುವುದು ಇಂತಹ ನೂರಾರು ಕೆಲಸಗಳನ್ನು ತಕರಾರೆತ್ತದೆ ಮಾಡುತ್ತಿದ್ದ. ಪ್ರತಿ ಕೆಲಸಕ್ಕೂ ಪ್ರತಿಫಲವಾಗಿ ಏನಾದರೂ ಸಿಕ್ಕೇ ಸಿಗುತ್ತಿತ್ತು.

ಇಂತಿಪ್ಪ ಪದುಮಣ್ಣ ವಕೀಲಿ ಪದವಿ ಪಡೆದು ಕೊಂಡು ವೃತ್ತಿ ಆರಂಭಿಸಿದ. ದಿನದ ಇಪ್ಪತ್ನಾಲ್ಕು ತಾಸು ಕೂಡ ಕಕ್ಷಿದಾರರ ಮನೆಯ ಕಡೆಗೆ ಕಾಲಾಡಿಸುತ್ತ ಇರುವ ಪ್ರವೃತ್ತಿಯಿಂದಾಗಿ ಕೇಸುಗಳು ಜೋರಾಗೇ ಸಿಗುತ್ತಿದ್ದವು. ಅವನಿಂದ ಉಪಕೃತರಾದವರೊಬ್ಬರು ತಮ್ಮ ನೆಂಟರ ಪೈಕಿಯ ಭಾಗವತರಿಗೆ ಶಿಫಾರಸು ಮಾಡಿ ಮದುವೆ ಮಾಡಿಸಿದರು. ಹಾಗೆ ಅವನ ಜೀವನದಲ್ಲಿ ಪ್ರವೇಶ ಪಡೆದುಕೊಂಡವಳು ನಾಗಲಕ್ಷ್ಮಿ. ಅರ್ಥಾತ್ ನಾಗಕ್ಕ. ಆದರೇನು ಮಾಡೋಣ. ಆ